**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2015-16ನೇ ಸಾಲಿನ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿ ಸಾರ್ವತ್ರಿಕ ಚುನಾವಣೆ ನಡೆಸಲು ಅನುದಾನ ಒದಗಿಸುವ ಕುರಿತು.

**ಓದಲಾಗಿದೆ:**

1. ರಾಜ್ಯ ಚುನಾವಣಾ ಆಯೋಗ ಕರ್ನಾಟಕ ಇವರ ಪತ್ರ ಸಂಖ್ಯೆ: ರಾಚುಆ:230:ಇಜಿಪಿ:2015, ದಿನಾಂಕ: 03-08-2015.
2. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 221 ವೆಚ್ಚ-6/2015, ದಿನಾಂಕ: 19-11-2015.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಪತ್ರದಲ್ಲಿ ರಾಜ್ಯ ಚುನಾವಣಾ ಆಯೋಗವು ಗ್ರಾಮ ಪಂಚಾಯತಿ ಚುನಾವಣೆಯ ಬಾಕಿ ಬಿಲ್ಲುಗಳ ಪಾವತಿಗಾಗಿ ಹೆಚ್ಚುವರಿ ಅನುದಾನ ರೂ. 15.00 ಕೋಟಿಗಳು ಹಾಗೂ ರಾಜ್ಯದಲ್ಲಿನ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿಗಳಿಗೆ ಜನವರಿ-2016ರಲ್ಲಿ ನಡೆಯುವ ಸಾರ್ವತ್ರಿಕ ಚುನಾವಣೆಗೆ ಅನುದಾನ ರೂ. 115.00 ಕೋಟಿಗಳ ಅವಶ್ಯಕತೆ ಇರುತ್ತದೆ. ಆದುದರಿಂದ ರೂ. 130.00 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ರಾಜ್ಯ ಚುನಾವಣಾ ಆಯೋಗ, ಕರ್ನಾಟಕ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 71 ಜಿಪಸ 2015, ಬೆಂಗಳೂರು, ದಿನಾಂಕ: 30-12-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, 2015-16ನೇ ಸಾಲಿನಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿ ಸಾರ್ವತ್ರಿಕ ಚುನಾವಣೆ ನಡೆಸಲು ಲೆಕ್ಕ ಶೀರ್ಷಿಕೆ 2515-00-101-0-01-059, (ಯೋಜನೇತರ)ಯಡಿ ಒದಗಿಸಲಾದ ಅನುದಾನ ರೂಪಾಯಿ 5000.00 ಲಕ್ಷ (ಐದು ಸಾವಿರ ಲಕ್ಷಗಳು ಮಾತ್ರ) ಗಳನ್ನು ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 221 ವೆಚ್ಚ-6/2015, ದಿನಾಂಕ: 23-12-2015ರಡಿ ನೀಡಿರುವ ಸಹಮತಿ ಅನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

30/12
(ಎಂ.ಬಿ.ಧೋತ್ರೆ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕರ್ನಾಟಕ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
4. ಅಪರ ಕಾರ್ಯದರ್ಶಿ(ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
5. ಉಪ ನಿರ್ದೇಶಕರು, ಖಜಾನೆ ಗಣಕ ಕೇಂದ್ರ, ಖನಿಜ ಭವನ, ಬೆಂಗಳೂರು.
6. ಮೇಲ್ವಿಚಾರಕರು, ಗಣಕಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
7. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.